ಮೆಡಿಕಲ್ ಕಾಲೇಜು ಪ್ರಾರಂಭಿಸುವುದು

464(283); ಶ್ರೀ ಬಣಕಾರ್ ಯು.ಬಿ

ಅ) ಬಹಳ ವರ್ಷಗಳಿಂದ ಹಾವೇರಿ ಜಿಲ್ಲೆ ಕೇಂದ್ರದಲ್ಲಿ ಮೆಡಿಕಲ್ ಕಾಲೇಜು ಪ್ರಾರಂಭಿಸುವುದಕ್ಕೆ ಒತ್ತಾಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮೆಡಿಕಲ್ ಕಾಲೇಜು ಪ್ರಾರಂಭಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ: ಶರಣ ಪ್ರಕಾಶ್ ಆರ್. ಪಾಟೀಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) 2013–14ನೇ ಸಾಲಿನ ಪರಿಷ್ಕೃತ ಆಯವ್ಯಯದ ಘೋಷಣೆಯಂತೆ ಕಾರವಾರ, ಕೊಡಗು, ಕೊಪ್ಪಳ, ಗದಗ, ಗುಲ್ಬರ್ಗಾ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಹೊಸ ೮ರು ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ

ಮುಂಬರುವ ಶೈಕ್ಷಣಿಕ ಸಾಲುಗಳಲ್ಲಿ ರಾಜ್ಯದ ಇನ್ನಿತರೆ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.

ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯ ಕುಂದುಕೊರತೆಗಳು

465(987); ಶ್ರೀ ಬಸವರಾಜ್ ಬಿ.ಎ (ಕೆ.ಆರ್ ಪುರಂ)

ಅ) ಬೆಂಗಳೂರು ನಗರ ಕೆ.ಆರ್ ಪುರಂದಲ್ಲಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಇರುವುದು ಸರ್ಕಾರದ ಗಮನಕ್ಕ ಬಂದಿದೆಯೇ, ಹಾಗಿದ್ದಲ್ಲಿ ಪ್ರಸ್ತುತ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು;

ಆ) ಪ್ರಸ್ತುತ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಆಸ್ಪತ್ರೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

ಈ) ಪ್ರಸ್ತುತ ಇರುವ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು? (ಸಂಪೂರ್ಣ ವಿವರಗಳನ್ನು ಒದಗಿಸುವುದು)

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬೆಂಗಳೂರು ನಗರ ಕೆ.ಆರ್ ಪುರಂದಲ್ಲಿ ಸರ್ಕಾರಿ ಸಾರ್ವಜನಿಕ ಆರೋಗ್ಯ ಕಟ್ಟಡವು ಪ್ರಸ್ತುತ 100 ಹಾಸಿಗೆಗಳ ಸಾಮರ್ಥ್ಯವನ್ನು ಹೊಂದಿದೆ

ಆ) ಇಲ್ಲ

ಇ) ಅನ್ವಯಿಸುವುದಿಲ್ಲ

ಈ) **ಮತ್ತು ಉ)** ಸರ್ಕಾರದ ಆದೇಶ ಸಂಖ್ಯೆ ಆಕುಕ/350/ಸಿಜಿಎಂ/2010, ದಿನಾಂಕ 11-01-2011ರಲ್ಲಿ ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಗಳ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ತಕ್ಷಣದಿಂದ ಜಾರಿಗೆ ಬರುವಂತೆ 3 ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ.